ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 ದಿನಾಂಕ: 20–08–2015

## ಪತ್ರಿಕಾ ಪ್ರಕಟಣೆ

# ಮುಖ್ಯಮಂತ್ರಿಗಳಿಗೆ ವರದಿ ಸಲ್ಲಿಕೆ

**ಬೆಂಗಳೂರು, ಆಗಸ್ಟ್ 20 (ಕರ್ನಾಟಕ ವಾರ್ತೆ)**

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಹೆಚ್. ಕಾಂತರಾಜ್ ಅವರು ಆಯೋಗವು ಸಿದ್ದಪಡಿಸಿರುವ 488 ಪುಟಗಳ ವಿಶೇಷ ವರದಿ – 2015 ಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಇಂದು ಸಲ್ಲಿಸಿದರು.

ಡಿಪಿಎಂ/ಬಾಬು:ಜಿಪಿಆರ್.

# ಮುಖ್ಯಮಂತ್ರಿ ಅವರಿಂದ ದೇವರಾಜ ಅರಸು ಪ್ರತಿಮೆಗೆ ಮಾಲಾರ್ಪಣೆ

**ಬೆಂಗಳೂರು, ಆಗಸ್ಟ್ 20 (ಕರ್ನಾಟಕ ವಾರ್ತೆ)**

ಸಾಮಾಜಿಕ ಕ್ರಾಂತಿಯ ಹರಿಕಾರ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ ಜನ್ಮ ಶತಮಾನೋತ್ಸವದ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಪಶ್ಚಿಮ ದ್ವಾರದಲ್ಲಿರುವ ದೇವರಾಜ ಅರಸು ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.

ರಾಜ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಹೆಚ್. ಆಂಜನೇಯ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಶ್ರೀಮತಿ ಉಮಾಶ್ರೀ, ಕೇಂದ್ರದ ಮಾಜಿ ಸಚಿವರಾದ ಡಾ. ಎಂ. ವೀರಪ್ಪ ಮೊಯಿಲಿ ಮತ್ತು ಎಂ.ವಿ. ರಾಜಶೇಖರನ್, ಸಂಸತ್ ಸದಸ್ಯ ಪ್ರಕಾಶ್ ಬಿ. ಹುಕ್ಕೇರಿ, ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಹೆಚ್. ಕಾಂತರಾಜ್, ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ. ರಾಮಚಂದ್ರಪ್ಪ

ಸೇರಿದಂತೆ ಹಲವು ಗಣ್ಯರು ಈ ಸಂದರ್ಭದಲ್ಲಿ ಮುಖ್ಯಮಂತ್ರಿಯವರ ಜೊತೆಗೆ ಹಾಜರಿದ್ದು, ಅರಸು ಅವರಿಗೆ ಪುಷ್ಪ ನಮನ ಸಲ್ಲಿಸಿದರು.

ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ ಅವರು ಮುಖ್ಯಮಂತ್ರಿ ಅಧಿಕಾರಾವಧಿಯಲ್ಲಿ ದೇವರಾಜ ಅರಸು ಅವರು ಬಳಸುತ್ತಿದ್ದ ಕಾರಿನಲ್ಲಿ ಪಶ್ಚಿಮ ದ್ವಾರದ ಅರಸು ಪ್ರತಿಮೆಯಿಂದ ಕೆಂಗಲ್ ಪ್ರತಿಮೆಯವರೆಗೆ ಪ್ರಯಾಣ ಬೆಳೆಸಿ, ಅರಸು ಅವರನ್ನು ಸ್ಮರಿಸಿದರು.

ಡಿಪಿಎಂ/ಬಾಬು:ಜಿಪಿಆರ್.

# ಈ ವಾರದ ಬೆಳ್ಳಿಸಿನಿಮಾ–ಬೆಳ್ಳಿಮಾತು: “ಹಜ್” ಚಲನಚಿತ್ರ ಪ್ರದರ್ಶನ, ಸಂವಾದ

**ಬೆಂಗಳೂರು, ಆಗಸ್ಟ್ 20 (ಕರ್ನಾಟಕ ವಾರ್ತೆ)**

**ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ–ಬೆಳ್ಳಿಮಾತು ಕಾರ್ಯಕ್ರಮದಡಿ ಆಗಸ್ಟ್ 22 ರ ಶನಿವಾರದಂದು ಬೆಳ್ಳಿ ಸಿನಿಮಾ “ಹಜ್” ಚಲನಚಿತ್ರ ಪ್ರದರ್ಶನ ಹಾಗೂ ಚಿತ್ರದ ನಿರ್ದೇಶಕ ನಿಖಿಲ್ ಮಂಜು ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.**

**ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಆಗಸ್ಟ್ 22 ರಂದು ಸಂಜೆ 4–00 ಗಂಟೆಗೆ ನಡೆಯುವ ಈ ಕಾರ್ಯಕ್ರಮದಲ್ಲಿ ಚಲನಚಿತ್ರ ಪ್ರದರ್ಶನ ಮತ್ತು ಸಂವಾದ ನಡೆಯಲಿದೆ ಎಂದು ಹೆಚ್.ಬಿ. ದಿನೇಶ್ ಅವರು ತಿಳಿಸಿದ್ದಾರೆ.**

**ಬಾಬು:ಜಿಪಿಆರ್.**

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರದ ವಿಶೇಷ

**ಬೆಂಗಳೂರು, ಆಗಸ್ಟ್ 20 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ (ಕಬ್ಬನ್) ಉದ್ಯಾನವನದ ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ **ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಆದೇಶ ಮತ್ತು ಸಲಹೆಯಂತೆ** ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:23–08–2015ರ ಭಾನುವಾರದಂದು ಕಬ್ಬನ್ ಉದ್ಯಾನವನದ ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ.

ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಉದಯರಾಗ**" ಎಂಬ ಶೀರ್ಷಿಕೆಯಡಿ ಜನ್ನಗಟ್ಟಿ ಕೃಷ್ಣಮೂರ್ತಿರವರಿಂದ ಜನಪದ ಗೀತೆ ಗಾಯನ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಇಲಾಖೆಯ 4 ಮತ್ತು 9ನೇ ಪಡೆಯ ಬ್ಯಾಂಡ್ ಕಲಾವಿದರು ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ ಆಕರ್ಷಕ "**ಪೊಲೀಸ್ ಬ್ಯಾಂಡ್**" ಸಂಗೀತ ಕಾರ್ಯಕ್ರಮವನ್ನು ನಡೆಸಿಕೊಡುತ್ತಾರೆ.

ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಡಿ.ಶೈಲ ಕಂಪ್ಲಿರವರಿಂದ ಸುಗಮ ಸಂಗೀತ, ಭಾವಗೀತೆ, ವಚನ, ಭಕ್ತಿಗೀತೆ ಮತ್ತು ದೇಶಭಕ್ತಿ ಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ಹಣ್ಣುಗಳಾದ ಮಾವು, ಪಪ್ಪಾಯ, ಏಲಕ್ಕಿ ಬಾಳೆ, ಮೂಸುಂಬಿ, ನೇರಳೆ(ಜಾಮೂನು) ಹಣ್ಣುಗಳ ಮಾರಾಟ, ಸಾವಯವ ಮಾವು, ಸೇಬು ಮತ್ತು ಸೀಬೆಹಣ್ಣಿನ ಜ್ಯೂಸ್, ಸಾವಯವ ಸೀಬೆ, ಮಾವಿನ ಹಣ್ಣಿನ ಫ್ರೂಟ್‌ಬಾರ್‌ಗಳು, ಸಾವಯವ ಹಲಸಿನ ಹಣ್ಣಿನ ಚಿಪ್ಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆ ಮಾರಾಟ ಮತ್ತು ಮನೆಗಳಿಗೆ ಅಗತ್ಯವಿರುವ ಗಿಡಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.

ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## <u>ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:</u>

1. <u>ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ</u>

- **ಬೆಳಿಗ್ಗೆ 07.00 ರಿಂದ 8.00 ಗಂಟೆಯವರೆಗೆ ಸೃಜನಶ್ರೀ ಆರ್ಟ್ ಆಫ್ ಹಾರ್ಟ್ ಸೂರತ್‌ರವರ ವತಿಯಿಂದ ಜೈಮಿನ್ ಕಣ್ಣನ್‌ರವರ ಶಿಷ್ಯ ವೃಂದದವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

➢ ಬೆಳಿಗ್ಗೆ 9.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ ನಾಟ್ಯಭೈರವಿ ನೃತ್ಯಶಾಲೆರವರ ವತಿಯಿಂದ ನೃತ್ಯಪ್ರದರ್ಶನವನ್ನು ಏರ್ಪಡಿಸಲಾಗಿದೆ.

➢ ಬೆಳಿಗ್ಗೆ 10.00 ಗಂಟೆಯಿಂದ ಬೆಳಿಗ್ಗೆ 11.00 ಗಂಟೆಯವರೆಗೆ ಡೆಲ್ಲಿ ಪಬ್ಲಿಕ್ ಸ್ಕೂಲ್, ದಕ್ಷಿಣ ಶಾಲೆ ಮಕ್ಕಳಿಂದ ಪರಿಸರ ಸಂರಕ್ಷಣೆ ಮತ್ತು ಸ್ವಚ್ಛತೆಯನ್ನು ಕಾಪಾಡುವ ಬಗ್ಗೆ ಬೀದಿ ನಾಟಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

➢ ಸಂಜೆ: 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಫೌಂಢೇಷನ್ ರವರ ಸಹಯೋಗದೊಂದಿಗೆ ಪ್ರೊ. ಸಿ.ಯಲ್ಲಪ್ಪ, ಕವಿಗಳು ಮತ್ತು ಕನ್ನಡ ಉಪನ್ಯಾಸಕರು ಇವರಿಂದ ಡಾ. ಶಿವರಾಮ ಕಾರಂತ್‌ರವರ ಸಾಹಿತ್ಯ ಮತ್ತು ಕನ್ನಡ ಚಿಂತನ ಉಪನ್ಯಾಸ ಕಾರ್ಯಕ್ರಮ ಹಾಗೂ ಗಾನಸೌರಭ ಯಕ್ಷಗಾನ ಶಾಲೆರವರ ವತಿಯಿಂದ ಶ್ರೀ ಬೇಗಾರ್ ಶಿವಕುಮಾರವರ ನಿರ್ದೇಶನದಡಿ ಯಕ್ಷಗಾನ ಪ್ರದರ್ಶನವನ್ನು ಏರ್ಪಡಿಸಲಾಗಿದೆ.

2. <u>ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ</u>

➢ ಬೆಳಿಗ್ಗೆ 6.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಘನತ್ಯಾಜ್ಯ ನಿರ್ವಹಣೆ ಮತ್ತು ಅಡುಗೆ ಮನೆಯಲ್ಲಿನ ತ್ಯಾಜ್ಯ (Kitchen Waste) ಉಪಯೋಗಿಸಿ ಗೊಬ್ಬರ ಉತ್ಪತ್ತಿ ಮಾಡುವುದು ಹಾಗೂ ಕಸದಿಂದ ಬಯೋಗ್ಯಾಸ್ ಉತ್ಪಾದನೆಯ ಬಗ್ಗೆ ಶ್ರೀ ಎನ್.ಎಸ್.ರಮಾಕಾಂತ್, Co-Founder, Solid Waste Management Round Table, Bengaluru ರವರಿಂದ ಪ್ರಾತ್ಯಾಕ್ಷಿಕೆ ಮೂಲಕ ತಿಳುವಳಿಕೆ ನೀಡಲಾಗುವುದು.

➢ ಬೆಳಿಗ್ಗೆ 9.00 ಗಂಟೆಯಿಂದ ಮಧ್ಯಾಹ್ನ 12.00 ಗಂಟೆಯವರೆಗೆ ತಾರಸಿ ಹಾಗೂ ಕೈತೋಟ (Kitchen Garden and Terrace Garden) ಬಗ್ಗೆ ತೋಟಗಾರಿಕೆ ಉಪ ನಿರ್ದೇಶಕರು, ಬೆಂಗಳೂರು ನಗರರವರಿಂದ ಪ್ರಾತ್ಯಕ್ಷತೆ ಮೂಲಕ ತರಭೇತಿಯನ್ನು ನೀಡಲಾಗುವುದು.

ಬಾಬು/ಕೆಎಂ

# <u>ನಗರ ಸ್ಥಳೀಯ ಸಂಸ್ಥೆಗಳಲ್ಲಿ ತೆರವಾಗಿರುವ ಖಾಲಿ ಸ್ಥಾನಗಳಿಗೆ ಉಪ ಚುನಾವಣೆ</u>

**ಬೆಂಗಳೂರು, ಆಗಸ್ಟ್ 20 (ಕರ್ನಾಟಕ ವಾರ್ತೆ)**

ರಾಮನಗರ ನಗರಸಭೆ, ಅಳ್ನಾವರ ಪಟ್ಟಣ ಪಂಚಾಯತಿ, ಮುದ್ದೇಬಿಹಾಳ ಪುರಸಭೆ, ಬಳ್ಳಾರಿ ಮಹಾನಗರಪಾಲಿಕೆ ಹಾಗೂ ಕುಷ್ಟಗಿ ಪುರಸಭೆ – ನಗರ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿಯಿರುವ ಸದಸ್ಯ ಸ್ಥಾನಗಳಿಗೆ ಉಪ ಚುನಾವಣೆ ನಡೆಸಲು ರಾಜ್ಯ ಚುನಾವಣಾ ಆಯೋಗವು ವೇಳಾಪಟ್ಟಿ ಪ್ರಕಟಿಸಿದೆ.

ಸಂಬಂಧಿಸಿದ ಜಿಲ್ಲಾಧಿಕಾರಿಗಳು ಆಗಸ್ಟ್ 26 ರಂದು ಅಧಿಸೂಚನೆ ಹೊರಡಿಸುವರು. ಸೆಪ್ಟೆಂಬರ್ 2 ರಂದು ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನವಾಗಿದೆ. ಸೆಪ್ಟೆಂಬರ್ 3 ರಂದು ನಾಮಪತ್ರ ಪರಿಶೀಲಿಸಲಾಗುವುದು. ನಾಮಪತ್ರ ಹಿಂತೆಗೆದುಕೊಳ್ಳಲು ಸೆಪ್ಟೆಂಬರ್ 5 ಕೊನೆಯ ದಿನವಾಗಿರುತ್ತದೆ. ಮತದಾನವನ್ನು ಸೆಪ್ಟೆಂಬರ್ 13 ರಂದು ನಡೆಸಲಾಗುವುದು. ಮತಎಣಿಕೆಯು ನಗರ ಸ್ಥಳೀಯ ಸಂಸ್ಥೆಗಳ

ವ್ಯಾಪ್ತಿಯಲ್ಲಿ ಸೆಪ್ಟೆಂಬರ್ 15 ರಂದು ನಡೆಯಲಿದೆ. ಸದಾಚಾರ ಸಮಿತಿಯು ಆಗಸ್ಟ್ 26 ರಿಂದ ಸೆಪ್ಟೆಂಬರ್ 15 ರವರೆಗೆ ಚುನಾವಣೆ ನಡೆಯುವ ವ್ಯಾಪ್ತಿಯಲ್ಲಿ ಮಾತ್ರ ಜಾರಿಯಲ್ಲಿರುತ್ತದೆ ಎಂದು ರಾಜ್ಯ ಚುನಾವಣಾ ಆಯೋಗದ ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್.

## ಸರಗೂರು ಪಟ್ಟಣ ಪಂಚಾಯಿತಿಗೆ ಚುನಾವಣೆ

**ಬೆಂಗಳೂರು, ಆಗಸ್ಟ್ 20 (ಕರ್ನಾಟಕ ವಾರ್ತೆ)**

ಮೈಸೂರು ಜಿಲ್ಲೆಯ ಹೆಚ್.ಡಿ. ಕೋಟೆ ತಾಲ್ಲೂಕು ಸರಗೂರು ಪಟ್ಟಣ ಪಂಚಾಯಿತಿಯ 12 ವಾರ್ಡ್‍ಗಳಿಗೆ ರಾಜ್ಯ ಚುನಾವಣಾ ಆಯೋಗವು ಚುನಾವಣಾ ವೇಳಾಪಟ್ಟಿ ಹೊರಡಿಸಿದೆ.

ಸಂಬಂಧಿಸಿದ ಜಿಲ್ಲಾಧಿಕಾರಿಗಳು ಆಗಸ್ಟ್ 26 ರಂದು ಅಧಿಸೂಚನೆ ಹೊರಡಿಸುವರು. ಸೆಪ್ಟೆಂಬರ್ 2 ರಂದು ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನವಾಗಿದೆ. ಸೆಪ್ಟೆಂಬರ್ 3 ರಂದು ನಾಮಪತ್ರ ಪರಿಶೀಲಿಸಲಾಗುವುದು. ನಾಮಪತ್ರ ಹಿಂತೆಗೆದುಕೊಳ್ಳಲು ಸೆಪ್ಟೆಂಬರ್ 5 ಕೊನೆಯ ದಿನವಾಗಿರುತ್ತದೆ. ಮತದಾನವನ್ನು ಸೆಪ್ಟೆಂಬರ್ 13 ರಂದು ನಡೆಸಲಾಗುವುದು. ಮತಎಣಿಕೆಯು ಸರಗೂರು ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಸೆಪ್ಟೆಂಬರ್ 15 ರಂದು ನಡೆಯಲಿದೆ. ಸದಾಚಾರ ಸಮಿತಿಯು ಆಗಸ್ಟ್ 26 ರಿಂದ ಸೆಪ್ಟೆಂಬರ್ 15 ರವರೆಗೆ ಚುನಾವಣೆ ನಡೆಯಲಿರುವ ಸರಗೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಮಾತ್ರ ಜಾರಿಯಲ್ಲಿರುತ್ತದೆ ಎಂದು ರಾಜ್ಯ ಚುನಾವಣಾ ಆಯೋಗದ ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್.

## ಮಾಧ್ಯಮದಲ್ಲಿ ಚುನಾವಣಾ ದಿನದಂದು ಚರ್ಚೆ, ಸಂದರ್ಶನ, ಸಂವಾದ ಮತದಾನದ ವೇಳೆ ನಿಷೇದ

**ಬೆಂಗಳೂರು, ಆಗಸ್ಟ್ 20 (ಕರ್ನಾಟಕ ವಾರ್ತೆ)**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ- 2015 ರ ಮತದಾನ ದಿನದಂದು ಅಂದರೆ (ದಿನಾಂಕ: 22-08-2015) ರಂದು ಮತದಾನಕ್ಕೆ ನಿಗದಿ ಪಡಿಸಿರುವ ಅವಧಿಯಲ್ಲಿ ( ಬೆ.07-00 ರಿಂದ ಸಂಜೆ 05-00 ರ ವರೆಗೆ) ದೃಶ್ಯ / ಶ್ರವಣ ಮಾಧ್ಯಮದಲ್ಲಿ ರಾಜಕೀಯ ಪಕ್ಷಗಳೊಂದಿಗೆ ಯಾವುದೇ ಚರ್ಚೆ, ಸಂದರ್ಶನ, ಸಂವಾದ ಇತ್ಯಾದಿಗಳನ್ನು ನಡೆಸುವಂತಿಲ್ಲವೆಂದು ಎಂದು ರಾಜ್ಯ ಚುನಾವಣಾ ಆಯೋಗದ ಪ್ರಕಟಣೆ ತಿಳಿಸಿದೆ.

ಬಾಬು/ಕೆಎಂ